**Akashvani : Bangalore**
**Regional Bulletin In Kannada**
**08.11.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**08.11.2024 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧.ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ರೈತರ ಜಮೀನುಗಳಿಗೆ ಎರಡನೇ ಬೆಳೆ ಬೆಳೆಯಲು ನೀರು ಪೂರೈಕೆ; ಮುಖ್ಯಮಂತ್ರಿ ಸಿದ್ದರಾಮಯ್ಯ

೨.ಸಂಡೂರು ಕ್ಷೇತ್ರದ ಉಪ ಚುನಾವಣೆ; ಬಿರುಸಿನಿಂದ ಸಾಗಿದ ಪಕ್ಷಗಳ ಬಹಿರಂಗ ಪ್ರಚಾರ

೩.'ಏಕ್ ಭಾರತ್ ಶ್ರೇಷ್ಠ ಭಾರತ್' ಸಾಕಾರಗೊಳ್ಳಲು ಸಂಗೀತ ಪ್ರೇರಣೆ - ಸಚಿವೆ ನಿರ್ಮಲಾ ಸೀತಾರಾಮನ್

೪.ಪಡಿತರ ಧಾನ್ಯ ವಿತರಣೆ ಲೋಪ ಸರಿಪಡಿಸಲು ಗ್ಯಾರಂಟಿ ಸಮಿತಿ ಅಧ್ಯಕ್ಷರ ಸೂಚನೆ

**<><*<><>*><>**

ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ರೈತರ ಜಮೀನುಗಳಿಗೆ ಎರಡನೇ ಬೆಳೆ ಬೆಳೆಯಲು ನೀರನ್ನು ಬಿಡಲಾಗುವುದು ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರಿಂದು ಸಂಡೂರು ಕ್ಷೇತ್ರದ ಉಪ ಚುನಾವಣೆಯ ಪ್ರಚಾರ ವೇಳೆಯಲ್ಲಿ ಮಾತನಾಡಿದರು. ತುಂಗಭದ್ರ ಅಣೆಕಟ್ಟು ೧೯ನೇ ಗೇಟ್ ಮುರಿದರೂ ಐದೇ ದಿನದಲ್ಲಿ ದುರಸ್ಥಿ ಮಾಡಿ ನೀರನ್ನು ಮತ್ತೆ ಸಂಗ್ರಹಿಸಿದೆ. ಇದರಿಂದಾಗಿ ಬೇಸಿಗೆ ಬೆಳೆಗೆ ನೀರು ಪೂರೈಕೆಯಾಗಲಿದೆ ಎಂದರು. ಭದ್ರ ಮೇಲ್ದಂಡೆ ಯೋಜನೆಗೆ ೫ ಸಾವಿರದ ೩೦೦ ಕೋಟಿ ನೀಡುವುದಾಗಿ ಹೇಳಿದ್ದ ಕೇಂದ್ರ ಸರ್ಕಾರ ಈಗ ಹಣವನ್ನು ಮಂಜೂರು ಮಾಡಿಲ್ಲ. ಆದರೆ ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ವಿಶೇಷವಾಗಿ ೫ ಸಾವಿರ ಕೋಟಿ ರೂಪಾಯಿ ನೀಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

**<><*<><>*><>**

ಸಂಡೂರು ಕ್ಷೇತ್ರದ ಉಪ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇನ್ನೂ ಮೂರು ದಿನ ಮಾತ್ರ ಬಾಕಿ ಇದೆ. ಇದರಿಂದ ಬಿಜೆಪಿ ಮತ್ತು ಕಾಂಗ್ರೆಸ್ ಮುಖಂಡರ ಪ್ರಚಾರ ಕಾರ್ಯ ಬಿರುಸಿನಿಂದ ಸಾಗಿದೆ. ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಕ್ಷೇತ್ರದ ಬನ್ನಿಹಟ್ಟಿ. ಏಳಬೆಂಚಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಅವರ ಪರವಾಗಿ ಬಹಿರಂಗ ಪ್ರಚಾರ ನಡೆಸಿದರು. ಇವರಲ್ಲದೆ ಸಚಿವರಾದ ಸಂತೋಷ್ ಲಾಡ್, ಜಮೀರ್ ಅಹಮ್ಮದ್, ಆರ್.ಬಿ.ತಿಮ್ಮಾಪುರ, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಜಯ್ ಸಿಂಗ್, ಶಾಸಕರು, ಸಂಸದರು ಮಾಜಿ ಸಚಿವರು ಮುಖಂಡರು ಇದ್ದರು. ಮತ್ತೊಂದಡೆ ಬಿಜೆಪಿಯಿಂದ ಕೇಂದ್ರ ಸಚಿವರಾದ ವಿ.ಸೋಮಣ್ಣ ಸಂಡೂರು ಕ್ಷೇತ್ರದ ಕುಡುತಿನಿಯಲ್ಲಿ, ಪ್ರಹ್ಲಾದ್ ಜೋಶಿ ಸಂಡೂರಿನಲ್ಲಿ, ಮಾಜಿ ಮುಖ್ಯ ಮಂತ್ರಿ ಬಿ.ಎಸ್.ಯಡಿಯೂರಪ್ಪ ಚೋರನೂರು, ಬೊಮ್ಮಗಟ್ಟ

ಗ್ರಾಮಗಳಲ್ಲಿ ಬಹಿರಂಗ ಪ್ರಚಾರ ನಡೆಸಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು. ಮಾಜಿ ಸಂಸದ ಪ್ರತಾಪ್ ಸಿಂಹ, ಮಾಜಿ ಸಚಿವರಾದ ಎನ್.ಮಹೇಶ್, ಅಶ್ವತ್ಥ ನಾರಾಯಣ, ವಿ.ರವಿಕುಮಾರ್ ಮೊದಲಾದವರು ಪ್ರಚಾರ ಕಾರ್ಯದಲ್ಲಿ ಪಾಲ್ಗೊಂಡಿದ್ದಾರೆ.

<><*<><>*><>

ಕರ್ನಾಟಕ ಸಂಗೀತ ಇಡೀ ದೇಶದಾದ್ಯಂತ ಮನೆ ಮಾತಾಗಿದ್ದು, ಏಕ್ ಭಾರತ್ ಶ್ರೇಷ್ಠ ಭಾರತ್ ಸಾಕಾರಗೊಳ್ಳಲು ಸಂಗೀತ ಪ್ರೇರಣೆಯಾಗಿದೆ ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲ ಸೀತಾರಾಮನ್ ತಿಳಿಸಿದ್ದಾರೆ. ಇಂದು ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದಲ್ಲಿ ಸುಗಂಧ ಉತ್ಸವ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮೈಸೂರು ಸಂಗೀತ ಸುಗಂಧ ಕಾರ್ಯಕ್ರಮ ಅಪಾರ ಸಂತಸ ತಂದಿದೆ. ಸಂಗೀತ ಕ್ಷೇತ್ರಕ್ಕೆ ಮೈಸೂರಿನ ಕೊಡುಗೆ ಅಪಾರವಾದುದು, ದೇಶ ಆರ್ಥಿಕವಾಗಿ ಸದೃಢವಾದರೆ ಇಡೀ ದೇಶ ಎಲ್ಲಾ ರಂಗಗಳಲ್ಲೂ ಸದೃಢವಾಗುತ್ತದೆ ಎಂದರು. ವಿಭಿನ್ನ ಭಾಷೆ ಸಂಸ್ಕೃತಿ ಹೊಂದಿದ್ದರೂ ದೇಶ ವಿವಿಧತೆಯಲ್ಲಿ ಏಕತೆಯಿಂದ ಕೂಡಿದೆ. ಕನ್ನಡ ಭಾಷೆ ಭಕ್ತಿ ಸಂಗೀತದ ಮೂಲಕ ಮನ ಮುಟ್ಟುತ್ತದೆ. ಹಲವು ವಿಶೇಷತೆಗಳನ್ನು ಹೊಂದಿರುವ ಮೈಸೂರು ದಾಸ ಸಂಗೀತ ಪರಂಪರೆಯನ್ನು ಹೊಂದಿದೆ ಎಂದು ತಿಳಿಸಿದರು.

<><*<><>*><>

ವಕ್ಫ್ ಸಂಬಂಧಿತ ಕೇಂದ್ರ ಜಂಟಿ ಸಂಸದೀಯ ಸಮಿತಿ ರಾಜ್ಯಕ್ಕೆ ಆಗಮಿಸಿರುವ ಕುರಿತು ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ.ಪಾಟೀಲ್ ಪ್ರತಿಕ್ರಿಯಿಸಿದ್ದಾರೆ. ಉಪಚುನಾವಣೆಯಲ್ಲಿ ಬಿಜೆಪಿ ನಾಯಕರು, ವಕ್ಫ್ ವಿವಾದದ ವಿಚಾರವನ್ನು ಮುಂದಿಟ್ಟುಕೊಂಡು ವಕ್ಫ್‌ಬೋರ್ಡ್ ಆಸ್ತಿ ತನಿಖೆಗಾಗಿ ಕೇಂದ್ರದ ಜಂಟಿ ಸಂಸದೀಯ ಸಮಿತಿ ತಂಡ ಆಗಮಿಸಿದೆ ಎಂದಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ತನಿಖಾ ಸಂಸ್ಥೆಗಳನ್ನು ದುರಪಯೋಗ ಪಡಿಸಿಕೊಳ್ಳುತ್ತಿದ್ದು, ಈಗ ಜೆಪಿಸಿ ಸಮಿತಿಯನ್ನು ದುರಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಇದು ಯಾವ ನೀತಿ ಎಂಬುದನ್ನು ಪ್ರಧಾನಿಯವರು ಉತ್ತರಿಸಬೇಕಿದೆ ಎಂದರು. ಕೇಂದ್ರ ಜಂಟಿ ಸಂಸದೀಯ ಸಮಿತಿಯನ್ನು ದುರುಪಯೋಗಪಡಿಸಿಕೊಳ್ಳುವ ಬದಲು ರಾಜ್ಯಕ್ಕೆ ಪತ್ರ ಬರೆದು ಮಾಹಿತಿ ಕೇಳಬಹುದಿತ್ತು. ಸಮಿತಿಯನ್ನು ಅನಧಿಕೃತವಾಗಿ ಬಳಕೆ ಮಾಡಿಕೊಂಡಿದ್ದು ದುರ್ಧೈವದ ಸಂಗತಿ ಎಂದು ಹೇಳಿದರು.

<><*<><>*><>

'ಮುಖ್ಯ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮದಡಿ' ಬಿಬಿಎಂಪಿ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್, ಇಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಯಶವಂತಪುರದ ಎಂಇಐ ಬಳಿ ವೈಟ್ ಟಾಪಿಂಗ್ ಕಾಮಗಾರಿಯ ಪರಿಶೀಲನೆ ನಡೆಸಿದರು. ಕಾಮಗಾರಿಗೆ ವೇಗ ನೀಡಿ, ಪ್ರತಿ ವಾರ ವರದಿ ನೀಡಬೇಕು. ನಿಗದಿತ ಸಮಯದೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸುಮ್ಮನಹಳ್ಳಿ ಬಳಿ ಬೀದಿ ನಾಯಿಗಳ ಸಂತಾನ ಹರಣ ಶಸ್ತ್ರ ಚಿಕಿತ್ಸಾ ಕೇಂದ್ರದ ಪುನರ್ ನವೀಕರಣ ನಡೆಯುತ್ತಿದ್ದು, ಈ ಹಿಂದೆ ೫೦ ನಾಯಿಗಳಿಗೆ ಶಸ್ತ್ರಚಿಕಿತ್ಸೆ

ಮಾಡಲಾಗುತ್ತಿತ್ತು. ನವೀಕರಣ ಮಾಡಿದ ಬಳಿಕ ೮೦ ನಾಯಿಗಳಿಗೆ ಶಸ್ತ್ರಚಿಕಿತ್ಸೆ ಮಾಡಬಹುದಾಗಿದ್ದು, ಒಂದು ತಿಂಗಳೊಳಗಾಗಿ ಕೆಲಸವನ್ನು ಪೂರ್ಣಗೊಳಿಸಿ ಶಸ್ತ್ರಚಿಕಿತ್ಸೆ ಪ್ರಾರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಧಾನ್ಯಗಳ ವಿತರಣೆಯಲ್ಲಿ ಆಗುವ ತೂಕದ ವ್ಯತ್ಯಾಸ, ಆಹಾರಧಾನ್ಯಗಳ ಗುಣಮಟ್ಟ ಪರಿಶೀಲನೆ ಮಾಡುವಂತೆ ದಾವಣಗೆರೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಟಿ. ಬಸವರಾಜ್ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಡಿತರದಾರರಿಂದ ಸಾಕಷ್ಟು ದೂರುಗಳು ಬರುತ್ತಿದ್ದು, ಇದಕ್ಕೆ ಅವಕಾಶ ನೀಡದಂತೆ ಕ್ರಮ ವಹಿಸಲು ಸೂಚಿಸಿದರು. ಗ್ಯಾರಂಟಿ ಯೋಜನೆ ಫಲಾನುಭವಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಬ್ಯಾಂಕ್ ಕೆವೈಸಿ, ಬಯೋಮೆಟ್ರಿಕ್ ಮೂಲಕ ಫಲಾನುಭವಿಗಳ ಖಾತೆಗೆ ವಿಳಂಬವಿಲ್ಲದೇ ಹಣ ಜಮೆಯಾಗುವಂತೆ ಕ್ರಮವಹಿಸಬೇಕೆಂದು ಅವರು ಸೂಚಿಸಿದರು.

<><*<><>*><>

ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ವತಿಯಿಂದ ದಾವಣಗೆರೆ ಜಿಲ್ಲೆಯಲ್ಲಿ ಮೆಕ್ಕೆಜೋಳ ಬೆಳೆದ ರೈತರಿಗೆ ನೆರವಾಗಲು, ಮೆಕ್ಕೆಜೋಳವನ್ನು ನೇರವಾಗಿ ಪ್ರತಿ ಕ್ವಿಂಟಾಲ್‌ಗೆ ೨ ಸಾವಿರದ ೪೦೦ ರೂಪಾಯಿ ಬೆಲೆಯಲ್ಲಿ ಖರೀದಿಸಲು ತೀರ್ಮಾನಿಸಲಾಗಿದೆ. ಮೆಕ್ಕೆಜೋಳ ಬೆಳೆದಿರುವ ಆಸಕ್ತ ರೈತರು ಸಮೀಪದ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಒಂದು ಕೆ.ಜಿ. ಪ್ರಮಾಣದಷ್ಟು ಮೆಕ್ಕೆಜೋಳದ ಮಾದರಿಯನ್ನು ನೀಡಿ, ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಾಯಿಸಿಕೊಳ್ಳಬಹುದು. ನೊಂದಣಿ ಪ್ರಕ್ರಿಯೆಯು ನವೆಂಬರ್ ೧೧ ರಿಂದ ಪ್ರಾರಂಭವಾಗುತ್ತಿದ್ದು, ದಾವಣಗೆರೆ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆಯಲಾಗಿರುತ್ತದೆ ಎಂದು ಸಹಾಯಕ ವ್ಯವಸ್ಥಾಪಕ ಸೂರಜ್ ತಿಳಿಸಿದ್ದಾರೆ.

<><*<><>*><>

ಸರ್ಕಾರದ ನೀತಿ ನಿರೂಪಣೆಗೆ ಸಾಂಖ್ಯಿಕ ಇಲಾಖೆ ದತ್ತಾಂಶಗಳೇ ಆಧಾರವಾಗಿವೆ. ಸಾಂಖ್ಯಿಕ ಇಲಾಖೆ ಸಂಗ್ರಹಿಸುವ ದತ್ತಾಂಶಗಳು ಹೆಚ್ಚಿನ ಮಹತ್ವ ಹೊಂದಿವೆ ಎಂದು ಚಿತ್ರದುರ್ಗ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದ್ದಾರೆ. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ವಿಭಾಗಮಟ್ಟದ ಪುನರ್‌ಮನನ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಸಾರ್ವಜನಿರಿಂದ ಹೆಚ್ಚಿನ ಪ್ರಶಂಸೆಗೆ ಒಳಗಾಗದೆ ಇದ್ದರೂ ಸಹ, ಸಾಂಖ್ಯಿಕ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಉತ್ತಮ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಸರ್ಕಾರಕ್ಕೆ ಅಗತ್ಯವಾದ ಮೂಲ ದತ್ತಾಂಶಗಳನ್ನು ಮುತುವರ್ಜಿಯಿಂದ ಸಂಗ್ರಹಿಸುತ್ತಾರೆ ಎಂದರು.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ಲಾಟರಿ ಟಿಕೆಟ್ ಮಾರಾಟದಿಂದ ಜನಸಾಮಾನ್ಯರಲ್ಲಿ ಕೌಟುಂಬಿಕ ಕಲಹಗಳು ಉಂಟಾಗುವುದರ ಜೊತೆಗೆ ಆರ್ಥಿಕ ನಷ್ಟಗಳು ಸಂಭವಿಸುತ್ತಿದೆ. ಲಾಟರಿ ಹಾವಳಿ ತಪ್ಪಿಸಲು ಲಾಟರಿಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಾತನಾಡಿದ ಅವರು, ಬೇರೆ ರಾಜ್ಯಗಳಿಂದ ಅನಧಿಕೃತವಾಗಿ ಲಾಟರಿ ಟಿಕೆಟ್ ತಂದು ಜಿಲ್ಲೆಯಲ್ಲಿ ಮಾರಾಟ ಮಾಡಲಾಗುತ್ತಿದೆ. ಲಾಟರಿ ಹಾವಳಿ ಹಾಗೂ ನಕಲಿ ಲಾಟರಿ ಮಾರಾಟ ತಡೆಗಟ್ಟಲು ಲಾಟರಿ ಮಾರಾಟ ಮಾಡುವ ಸ್ಥಳಗಳಲ್ಲಿ ಹೆಚ್ಚೆಚ್ಚು ಅರಿವು ಮೂಡಿಸಬೇಕು ಎಂದರು. ಗ್ರಾಮ ಪಂಚಾಯಿತಿ, ಸ್ತ್ರೀ ಶಕ್ತಿ ಸಂಘ ಹಾಗೂ ಸ್ವಸಹಾಯ ಸಂಘಗಳ ಮೂಲಕ ಜನ ಜಾಗೃತಿ ಮೂಡಿಸಬೇಕು. ಜೊತೆಗೆ ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

<><*<><>*><>

ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘವು ತನ್ನ ಸದಸ್ಯರ ಕ್ಷೇಮಾಭಿವೃದ್ಧಿಗಾಗಿ ಸ್ಥಾಪಿಸಿರುವ ಪತ್ರಕರ್ತರ ಕಲ್ಯಾಣ ನಿಧಿಗೆ ರಾಜ್ಯ ಸರ್ಕಾರ ೨೫ ಲಕ್ಷ ರೂಪಾಯಿ ಅನುದಾನ ಬಿಡುಗಡೆ ಮಾಡಿ ಅಧಿಕೃತ ಆದೇಶ ಹೊರಡಿಸಿದೆ. ೨೦೨೨ರಲ್ಲಿ ಬಿ.ವಿ.ಗೋಪಿನಾಥ್ ಸಂಘದ ಅಧ್ಯಕ್ಷರಾಗಿ ಆಯ್ಕೆಯಾದ ವೇಳೆ ಜಿಲ್ಲೆಯ ಪತ್ರಕರ್ತರ ಆಪತ್ಕಾಲಕ್ಕೆ ನೆರವಾಗುವ ಸಲುವಾಗಿ ೧ ಕೋಟಿ ರೂಪಾಯಿಗಳ ಕ್ಷೇಮಾಭಿವೃದ್ಧಿ ನಿಧಿ ಸಂಗ್ರಹಿಸುವುದಾಗಿ ಪ್ರಕಟಿಸಿದ್ದರು.

<><*<><>*><>

ಸಕಾಲ ಯೋಜನೆಯ ಅಡಿಯಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡಬೇಕೆಂದು ಗದಗ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜರುಗಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಗದಗ ಜಿಲ್ಲೆ ಸಕಾಲ ಅರ್ಜಿಗಳ ವಿಲೇವಾರಿಯಲ್ಲಿ ಅಧಿಕಾರಿಗಳು ಸಕಾಲ ಹೆಚ್ಚು ನಿಗಾ ವಹಿಸುವ ಮೂಲಕ ಯೋಜನೆಯನ್ನು ಯಶಸ್ವಿಗೊಳಿಸುವುದರೊಂದಿಗೆ ಸಾರ್ವಜನಿಕರಿಗೆ ಸಕಾಲದಲ್ಲಿ ಸೇವೆ ಒದಗಿಸಬೇಕು. ಈ ಕುರಿತು ನಿರ್ಲಕ್ಷ್ಯ ಮಾಡಬಾರದು ಎಂದು ಸಲಹೆ ನೀಡಿದರು. ಸಕಾಲ ಯೋಜನೆಯಡಿ ಸ್ವೀಕರಿಸಿದ ಅರ್ಜಿಗಳನ್ನು ವಿನಾಕಾರಣ ತಿರಸ್ಕಾರ ಮಾಡಬಾರದು ಹಾಗೂ ಸ್ವೀಕರಿಸಿದ ಅರ್ಜಿಗಳಿಗೆ ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಬೇಕು. ಸಕಾಲದಲ್ಲಿ ಅರ್ಜಿಗಳ ವಿಲೇವಾರಿ ಸಮರ್ಪಕ ಕೆಲಸ ನಿರ್ವಹಣೆಯಾಗದಿದ್ದರೆ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಗೋವಿಂದ ರೆಡ್ಡಿ ಎಚ್ಚರಿಕೆ ನೀಡಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಅಣ್ಣೇಶ್ವರ ಗ್ರಾಮದ ಗ್ರಾಮದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯ, ಕೌಶಲ್ಯ ಅಭಿವೃದ್ಧಿ ಘಟಕ, ತೋಟಗಾರಿಕೆ ಇಲಾಖೆ, ಸಹಯೋಗದೊಂದಿಗೆ ತರಕಾರಿ ಬೆಳೆಗಳಲ್ಲಿ ನರ್ಸರಿ ತಾಂತ್ರಿಕತೆಗಳು ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬೆಂಗಳೂರು ಜಿಕೆವಿಕೆ ಕೌಶಲ್ಯಾಭಿವೃದ್ಧಿ ಘಟಕ ನಿರ್ದೇಶಕಿ ಹಾಗೂ ಪ್ರಾಧ್ಯಾಪಕಿ

ಡಾ. ಟಿ.ಕೆ ನಾಗರತ್ನ ಮಾತನಾಡಿ, ತರಕಾರಿ ಬೆಳೆಗಳಲ್ಲಿ ಗುಣಮಟ್ಟದ ಮತ್ತು ಆರೋಗ್ಯಕರ ಸಸಿಗಳ ಉತ್ಪಾದನೆ ಅಗತ್ಯವಾಗಿರುತ್ತದೆ. ಹಸಿರು ಮನೆ ಪ್ಲಾಸ್ಟಿಕ್ ಟ್ರೇ, ಕೋಕೋ ಪೀಟ್ ಇಲ್ಲವಾದಲ್ಲಿ ಹೊಲದಲ್ಲಿ ಸೂಕ್ತವಾದ ಸ್ಥಳವನ್ನು ಆರಿಸುವ ಮೂಲಕ ಸಸಿ ಮಡಿಯನ್ನು ತಯಾರಿಸಿಕೊಳ್ಳಬೇಕು. ತೋಟಗಾರಿಕೆ ಬೆಳೆಗಳಲ್ಲಿ ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡರೆ ಕೃಷಿ ಲಾಭದಾಯಕವಾಗಲಿದೆ ಎಂದು ತಿಳಿಸಿದರು.

**<><*<><>*><>**

ಹವಾ ವರ್ತಮಾನ...

ರಾಜ್ಯದಲ್ಲಿ ಈಶಾನ್ಯ ಮುಂಗಾರು ದುರ್ಬಲವಾಗಿತ್ತು. ದಕ್ಷಿಣ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ. ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿ ಒಣಹವೆ ಇತ್ತು.

ರಾಜ್ಯದಲ್ಲಿ ಅತಿ ಹೆಚ್ಚಿನ ಗರಿಷ್ಠ ಉಷ್ಣಾಂಶ ೩೬.೪ ಡಿಗ್ರಿ ಸೆಲ್ಸಿಯಸ್ ಕಾರವಾರದಲ್ಲಿ ದಾಖಲಾಗಿದ್ದು, ಅತಿ ಕಡಿಮೆ ಉಷ್ಣಾಂಶ ೧೫.೪ ಡಿಗ್ರಿ ಸೆಲ್ಸಿಯಸ್ ಬೆಳಗಾವಿ ವಿಮಾನ ನಿಲ್ದಾಣ ಮತ್ತು ಧಾರವಾಡದಲ್ಲಿ ದಾಖಲಾಗಿದೆ.

ಮುಂದಿನ ೨೪ ಗಂಟೆಗಳಲ್ಲಿ ರಾಜ್ಯದಾದ್ಯಂತ ಒಣಹವೆ ಇರುವ ಸಾಧ್ಯತೆಯಿದೆ.

ಬೆಂಗಳೂರು ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಾಹಶಃ ಮೋಡಕವಿದ ವಾತಾವರಣವಿರಲಿದ್ದು, ಒಣಹವೆ ಇರುವ ಸಾಧ್ಯತೆಯಿದೆ.

ಕೆಲವು ಸ್ಥಳಗಳಲ್ಲಿ ಮುಂಜಾನೆ ಮಂಜು ಮುಸುಕುವ ಸಂಭವ. ಗರಿಷ್ಠ ೩೦ ಡಿಗ್ರಿ ಸೆಲ್ಸಿಯಸ್, ಕನಿಷ್ಠ ೧೯ ಡಿಗ್ರಿ ಸೆಲ್ಸಿಯಸ್ ಸಾಧ್ಯತೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೬.೩೫ ಕ್ಕೆ <>*><>**